**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–74)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 38)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 38)ರ, 3ನೇ ಪ್ರಕರಣದ, (3)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

“(ಎ-ಎ) ಬಯಲುಸೀಮೆ ಪ್ರದೇಶದ ಅಧಿಕಾರವ್ಯಾಪ್ತಿಯೊಳಗಿನ ಜಿಲ್ಲೆ ಅಥವಾ ತಾಲ್ಲೂಕನ್ನು ನೋಡಲ್ ಜಿಲ್ಲೆ ಅಥವಾ ತಾಲ್ಲೂಕನ್ನಾಗಿ ಆಯ್ಕೆ ಮಾಡಿದ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರು”

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿಯ ಸದರಿ ಪ್ರದೇಶದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಜಿಲ್ಲೆ ಅಥವಾ ತಾಲ್ಲೂಕನ್ನು ನೋಡಲ್ ಜಿಲ್ಲೆ ಅಥವಾ ತಾಲ್ಲೂಕನ್ನಾಗಿ ಆಯ್ಕೆ ಮಾಡಿದ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರನ್ನು ಸೇರಿಸಲು, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 38)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

# **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಈ ಹಂತದಲ್ಲಿ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಡಿ. ಸುಧಾಕರ್**
ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994ರ

## (1994ರ ಕರ್ನಾಟಕ ಅಧಿನಿಯಮ 38) ಉದ್ಧೃತ ಭಾಗ

**XXX XXX XXX**

**3. ಮಂಡಲಿಯ ರಚನೆ.- XXX XXX XXX**

(3) ಮಂಡಲಿಯು ಈ ಮುಂದಿನ ಸದಸ್ಯರನ್ನು ಹೊಂದಿರತಕ್ಕದ್ದು, ಎಂದರೆ :-

(ಎ)ಬಯಲುಸೀಮೆ ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಲಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು ;

(ಬಿ) ಬಯಲುಸೀಮೆ ಪ್ರದೇಶದ ಮೇಲೆ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಜಿಲ್ಲಾ ಪಂಚಾಯತ್ ಅಧ್ಯಕ್ಷರು;

(ಸಿ) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಹತ್ತು ಮಂದಿಯನ್ನು ಮೀರದ ಸದಸ್ಯರು. ಅವರ ಪೈಕಿ ಇಬ್ಬರು ಅನುಸೂಚಿತ ಜಾತಿಗಳು ಮತ್ತು ಒಬ್ಬರು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳಾಗಿರತಕ್ಕದ್ದು ;

(ಡಿ) ಬಯಲು ಸೀಮೆಯ ಪ್ರತಿಯೊಂದು ವಿಭಾಗದ ವಿಭಾಗೀಯ ಕಮೀಷನರು ;

(ಇ)ಮಂಡಲಿಯ ಕಾರ್ಯದರ್ಶಿ ;

(ಎಫ್) ಬಯಲು ಸೀಮೆಯ ಪ್ರದೇಶದಲ್ಲಿನ ಪ್ರತಿಯೊಂದು ಜಿಲ್ಲೆಯ ಡೆಪ್ಯುಟಿ ಕಮೀಷನರು.

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 44, ಪ್ರತಿಗಳು 250, 12ನೇ ಡಿಸೆಂಬರ್ 2025